ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ವಿಧಾನ ಪರಿಷತ್ತಿನ ಸದಸ್ಯರ ಹೆಸರು | ಶ್ರೀ ಕಿಶೋರ್ ಕುಮಾರ್ ಪುತ್ತೂರು (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಪ್ರಶ್ನೆಯ ವಿಧ | ಚುಕ್ಕೆ ಗುರುತಿಲ್ಲದ |
| ಪ್ರಶ್ನೆ ಸಂಖ್ಯೆ | 789 (967) |
| ಉತ್ತರಿಸಬೇಕಾದ ದಿನಾಂಕ: | 15-12-2025 |

| ಕ್ರ.ಸ | ಪ್ರಶ್ನೆಗಳು | ಉತ್ತರಗಳು |
|---|---|---|
| ಅ) | ರಾಜ್ಯದಲ್ಲಿ ಪದವಿ ಪೂರ್ವ ಕಾಲೇಜುಗಳಲ್ಲಿ ಎಷ್ಟು ಉಪನ್ಯಾಸಕರ ಹುದ್ದೆಗಳು ಖಾಲಿ ಇವೆ; ಖಾಲಿ ಹುದ್ದೆಗಳ ಭರ್ತಿಗೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ; (ಜಿಲ್ಲಾವಾರು ವಿವರ ನೀಡುವುದು) | ರಾಜ್ಯದ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಖಾಲಿ ಇರುವ ಉಪನ್ಯಾಸಕರ ಹುದ್ದೆಗಳ ಸಂಖ್ಯೆ: 5204.<br>(ಜಿಲ್ಲಾವಾರು ಸಂಖ್ಯೆಗಳ ವಿವರ ಅನುಬಂಧ)<br><br>ರಾಜ್ಯದ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಖಾಲಿ ಇರುವ 5204 ಉಪನ್ಯಾಸಕರ ಹುದ್ದೆಗಳ ಪೈಕಿ ನೇರ ನೇಮಕಾತಿಗೆ ಲಭ್ಯವಿರುವ 814 ಹುದ್ದೆಗಳ ಭರ್ತಿಗೆ ಅನುಮತಿಯನ್ನು ನೀಡಿದ್ದು ನೇರ ನೇಮಕಾತಿಯ ಕುರಿತು ವೃಂದ ಮತ್ತು ನೇಮಕಾತಿ ನಿಯಮಗಳಿಗೆ ದಿನಾಂಕ: 15-10-2024 ರಂದು ತಿದ್ದುಪಡಿ ತಂದಿರುವ ಹಿನ್ನೆಲೆಯಲ್ಲಿ ಉಪನ್ಯಾಸಕರ ಹುದ್ದೆಗಳಿಗೆ ನೇರ ನೇಮಕಾತಿ ಮೂಲಕ ಆಯ್ಕೆ ಮಾಡಲು ಆಯ್ಕೆ ಪ್ರಾಧಿಕಾರವನ್ನು ನಿರ್ದಿಷ್ಟಪಡಿಸಿ ತ್ವರಿತವಾಗಿ ನೇಮಕಾತಿ ಪ್ರಕ್ರಿಯೆಯನ್ನು ಕ್ರಮಕೈಗೊಳ್ಳಲಾಗುವುದು.<br><br>ಕಾಲೇಜುಗಳಲ್ಲಿ ಖಾಲಿ ಇರುವ 5204 ಉಪನ್ಯಾಸಕರ ಹುದ್ದೆಗಳ ಪೈಕಿ ಮುಂಬಡ್ತಿಗೆ ಲಭ್ಯವಿರುವ 1203 ಹುದ್ದೆಗಳಿಗೆ ಸಂಬಂಧಿಸಿದಂತೆ ಕುರಿತು ಸರ್ಕಾರದ ಆದೇಶ ಸಂಖ್ಯೆ: ಇಪಿ 204 ಎಸ್ ಹೆಚ್ ಹೆಚ್ 2025, ದಿನಾಂಕ: 24-09-2025 ರಲ್ಲಿ ಅರ್ಹತಾ ಪರೀಕ್ಷೆಯನ್ನು ನಡೆಸಲು ಕೇಂದ್ರಿಯ ದಾಖಲಾತಿ ಘಟಕ, ಶಾಲಾ ಶಿಕ್ಷಣ ಇಲಾಖೆ, ಸೆಂಟ್ರಲ್ ಜೂನಿಯರ್ ಕಾಲೇಜು ಆವರಣ, ಕಾವೇರಿ ಭವನದ ಎದರು, ಕೆಂಪೇಗೌಡ ರಸ್ತೆ, ಬೆಂಗಳೂರು ಇವರನ್ನು ಸಕ್ಷಮ ಪ್ರಾಧಿಕಾರಿಯಾನ್ನಾಗಿ ನಿರ್ದಿಷ್ಟಪಡಿಸಿ ಆದೇಶಿಸಲಾಗಿದೆ.<br><br>ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ ಇವರಿಗೆ ಸರ್ಕಾರಿ ಪ್ರೌಢಶಾಲಾ ಸಹಶಿಕ್ಷಕರ ವೃಂದದಿಂದ ಶಾಲಾ ಶಿಕ್ಷಣ ಇಲಾಖೆ (ಪದವಿ ಪೂರ್ವ) ಯ ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ಉಪನ್ಯಾಸಕರ ವೃಂದಕ್ಕೆ ಬಡ್ತಿ ನೀಡುವ ಸಂಬಂಧ ಅರ್ಹತಾ ಪರೀಕ್ಷೆ ನಡೆಸಲು ಅಧಿಸೂಚನೆ ಹೊರಡಿಸುವಂತೆ ದಿನಾಂಕ: 27.11.2025 ರಲ್ಲಿ ಶಾಲಾ ಶಿಕ್ಷಣ (ಪದವಿ ಪೂರ್ವ) ಇಲಾಖೆಯಿಂದ ಕೋರಲಾಗಿದೆ.<br><br>ಅದರಂತೆ ಕೇಂದ್ರಿಯ ದಾಖಲಾತಿ ಘಟಕ, ಶಾಲಾ ಶಿಕ್ಷಣ ಇಲಾಖೆ, ಬೆಂಗಳೂರು ಇವರು ಅರ್ಹತಾ ಪರೀಕ್ಷೆ ನಡೆಸಿ, ಅರ್ಹ ಸಹ ಶಿಕ್ಷಕರ ಪಟ್ಟಿಯನ್ನು ಸಲ್ಲಿಸಿದ ನಂತರ ಬಡ್ತಿ ನೀಡಲು ನಿಯಮಾನುಸಾರ ಕ್ರಮಕೈಗೊಳ್ಳಲಾಗುವುದು. |

| | | |
|---|---|---|
| ಆ) | ರಾಜ್ಯದಲ್ಲಿ ಪ್ರಸ್ತುತ ಅತಿಥಿ ಉಪನ್ಯಾಸಕರಿಗೆ ನಿಗಧಿಪಡಿಸಿರುವ ವೇತನ ಎಷ್ಟು; ಪ್ರಸ್ತುತ ನೀಡುತ್ತಿರುವ ವೇತನ ತುಂಬಾ ಕಡಿಮೆ ಇದ್ದು ಇದನ್ನು ಹೆಚ್ಚಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು; | ರಾಜ್ಯದ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ತಾತ್ಕಾಲಿಕವಾಗಿ ನೇಮಕಗೊಂಡ ಅತಿಥಿ ಉಪನ್ಯಾಸಕರಿಗೆ-ರೂ. 14,000/-ಗಳ ಗೌರವಧನವನ್ನು ನೀಡಲಾಗುತ್ತಿದೆ.<br><br>ಸರ್ಕಾರದ ಆದೇಶ ಸಂಖ್ಯೆ: ಇಪಿ 137 ಎಸ್ಇಎಸ್ 2025, ದಿನಾಂಕಃ 15-05-2025 ರ ಆದೇಶದಲ್ಲಿ ರೂ. 12,000/- ಗಳ ಗೌರವ ಸಂಭಾವನೆಯನ್ನು ರೂ. 14,000/- ಗಳಿಗೆ ಹೆಚ್ಚಿಸಿ ಆದೇಶ ಹೊರಡಿಸಲಾಗಿರುತ್ತದೆ. |
| ಇ) | ಮಹಿಳಾ ಅತಿಥಿ ಉಪನ್ಯಾಸಕರಿಗೆ ಹೆರಿಗೆ ರಜೆ ಹಾಗೂ ಇತರ ಸೌಲಭ್ಯಗಳನ್ನು ನೀಡಲು ಸರ್ಕಾರದಿಂದ ಯಾವಾಗ ಕ್ರಮ ವಹಿಸಲಾಗುವುದು; | ಅತಿಥಿ ಉಪನ್ಯಾಸಕರ ಸೇವೆಯನ್ನು ತಾತ್ಕಾಲಿಕವಾಗಿ ಆಯಾ ಶೈಕ್ಷಣಿಕ ವರ್ಷದ 10 ತಿಂಗಳ ಅವಧಿಗೆ ಮಾತ್ರ ಬಳಸಿಕೊಳ್ಳಲಾಗುತ್ತಿದ್ದು, ಮಹಿಳಾ ಅತಿಥಿ ಉಪನ್ಯಾಸಕರಿಗೆ ಹೆರಿಗೆ ರಜೆ ಹಾಗೂ ಇತರೆ ಸೌಲಭ್ಯಗಳನ್ನು ನೀಡಲು ಅವಕಾಶವಿರುವುದಿಲ್ಲ. |
| ಈ) | ಅತಿಥಿ ಉಪನ್ಯಾಸಕರಿಗೆ ಈಗ ನೀಡುತ್ತಿರುವ ಮಾಸಿಕ ಗೌರವ ಧನವು ರೂ. 14,000/- ಆಗಿದ್ದು ಇದು ಗ್ರೂಪ್-ಡಿ ನೌಕರರ ವೇತನಕ್ಕಿಂತಲೂ ಕಡಿಮೆ ಇದ್ದು ಇದನ್ನು ಕನಿಷ್ಠ 30,000/- ರೂಗಳಿಗೆ ಹೆಚ್ಚಿಸುವ ಬಗ್ಗೆ ಸರ್ಕಾರದ ನಿಲುವೇನು; ಪ್ರಸ್ತುತ ನೀಡುತ್ತಿರುವ ಮಾಸಿಕ ಗೌರವಧನವನ್ನು ಶೈಕ್ಷಣಿಕ ವರ್ಷದ ಮಾರ್ಚ್ ತಿಂಗಳ ಅಂತ್ಯದವರೆಗೆ ನೀಡಲು ಕ್ರಮ ವಹಿಸಲಾಗಿದಿಯೇ? | ರಾಜ್ಯದ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಪ್ರಸ್ತುತ ತಾತ್ಕಾಲಿಕವಾಗಿ ನೇಮಕಗೊಳ್ಳುವ ಅತಿಥಿ ಉಪನ್ಯಾಸಕರಿಗೆ ರೂ. 14,000/-ಗಳ ಗೌರವಧನವನ್ನು ನೀಡಲಾಗುತ್ತಿದ್ದು, ಆಯಾ ಶೈಕ್ಷಣಿಕ ವರ್ಷದ 10 ತಿಂಗಳ ಅವಧಿಗೆ ಅಂದರೆ ಜೂನ್ ಮಾಹೆಯಿಂದ ಮಾರ್ಚ್ ಮಾಹೆಯವರೆಗೆ ಗೌರವಧನವನ್ನು ಬಿಡುಗಡೆ ಮಾಡಲಾಗುತ್ತಿದೆ.<br><br>ಸರ್ಕಾರದ ಆದೇಶ ಸಂಖ್ಯೆ: ಇಪಿ 137 ಎಸ್ಇಎಸ್ 2025 ದಿನಾಂಕ: 15-05-2025 ರಲ್ಲಿ ರೂ. 12,000/- ಗಳ ಗೌರವ ಸಂಭಾವನೆಯನ್ನು ರೂ. 14,000/- ಗಳಿಗೆ ಹೆಚ್ಚಿಸಿ ಆದೇಶ ಹೊರಡಿಸಲಾಗಿರುವ ಹಿನ್ನೆಲೆಯಲ್ಲಿ ಹೆಚ್ಚಿಸುವ ಪ್ರಸ್ತಾವನೆ ಇರುವುದಿಲ್ಲ. |

ಸಂಖ್ಯೆ: ಇಪಿ 384 ಡಿಜಿಡಬ್ಲ್ಯೂ 2025

(ಎಸ್. ಮಧು ಬಂಗಾರಪ್ಪ)
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು

| ಪ್ರಶ್ನೆ ಸಂಖ್ಯೆ: 789 (967) ಗೆ ಅನುಬಂಧ | | |
|---|---|---|
| ಖಾಲಿ ಇರುವ ಉಪನ್ಯಾಸಕ ಹುದ್ದೆಗಳ ವಿವರ | | |
| ಕ್ರ ಸಂ | ಜಿಲ್ಲೆಯ ಹೆಸರು | ಖಾಲಿ ಹುದ್ದೆಗಳ ಸಂಖ್ಯೆ |
| 1 | BANGALORE NORTH | 35 |
| 2 | BANGALORE SOUTH | 19 |
| 3 | BANGALORE RURAL | 67 |
| 4 | RAMANAGAR | 133 |
| 5 | BELLARY | 185 |
| 6 | CHIKKODI | 197 |
| 7 | BELAGAVI | 149 |
| 8 | BAGALKOT | 193 |
| 9 | VIJAYAPURA | 144 |
| 10 | BIDAR | 77 |
| 11 | DAVANAGERE | 102 |
| 12 | CHITRADURGA | 180 |
| 13 | CHIKAMAGALUR | 213 |
| 14 | GADAG | 133 |
| 15 | HAVERI | 162 |
| 16 | DHARWAD | 87 |
| 17 | KALBURGI | 135 |
| 18 | YADGIR | 117 |
| 19 | HASSAN | 380 |
| 20 | CHIKKABALLAPURA | 133 |
| 21 | KOLAR | 183 |
| 22 | CHAMARAJANAGAR | 109 |
| 23 | MYSURU | 186 |
| 24 | MANDYA | 238 |
| 25 | UTTARA KANNADA | 228 |
| 26 | KOPPAL | 204 |
| 27 | RAICHUR | 142 |
| 28 | DAKSHINA KANNADA | 262 |
| 29 | UDUPI | 194 |
| 30 | SHIVAMOGGA | 205 |
| 31 | TUMKUR | 333 |
| 32 | KODAGU | 79 |
| | ಒಟ್ಟು | 5204 |

ಉಪನಿರ್ದೇಶಕರು (ಆಡಳಿತ) 4/12/25
ಶಾಲಾ ಶಿಕ್ಷಣ ಇಲಾಖೆ (ಪದವಿ ಪೂರ್ವ)